## ಅನುದಾನ ಬಿಡುಗಡೆಯಲ್ಲಿ ತಾರತಮ್ಯದ ಆರೋಪ | ಯತ್ನಾಳ್ ನೇತೃತ್ವದಲ್ಲಿ ಯಡಿಯೂರಪ್ಪ ವಿರುದ್ಧ ದೂರು

# ಸಿಎಂ ವಿರುದ್ಧ ರಾಜ್ಯಾಧ್ಯಕ್ಷರಿಗೆ ದೂರು

20/6/20

**ವಿಶ್ವವಾಣಿ ಸುದ್ದಿಮನೆ** ಬೆಂಗಳೂರು

ರಾಜ್ಯದಲ್ಲಿ ಭುಗಿಲೆದಿದ್ದ ಬಿಜೆಪಿ ನಾಯಕರ ಬಂಡಾಯ ಕಡಿಮೆಯಾಯಿತು ಎನ್ನುವ ಮೊದಲೇ, ಇನ್ನೊಂದು ಸುತ್ತಿನ ಅಸಮಾಧಾನ ಶುರುವಾಗಿದೆ.

ಕೆಲದಿನಗಳ ಹಿಂದಷ್ಟೇ ಉಮೇಶ್ ಕತ್ತಿ, ಮುರುಗೇಶ್ ನಿರಾಣಿ ಹಾಗೂ ಬಸನಗೌಡ ಪಾಟೀಲ್ ಯತ್ನಾಳ್ ನೇತೃತ್ವದಲ್ಲಿ ಕಾಣಿಸಿಕೊಂಡಿದ್ದ ಬಂಡಾಯದ ಹೊಗೆಯನ್ನು ಆರಿಸುವಲ್ಲಿ ಯಡಿಯೂರಪ್ಪ ಯಶಸ್ವಿಯಾಗಿದ್ದರು. ಆದರೆ ಅದು ಮುಗಿಯುವ ಮೊದಲೇ, ಯತ್ನಾಳ್ ಮತ್ತೊಂದು ತಂಡವನ್ನು ಕಟ್ಟಿಕೊಂಡು ಬಿಜೆಪಿ ರಾಜ್ಯಾಧ್ಯಕ್ಷ ನಳಿನ್‌ಕುಮಾರ್ ಕಟೀಲ್ ಬಳಿ ದೂರು ತೆಗೆದುಕೊಂಡು ಹೋಗಿದ್ದಾರೆ.



**ವಿಜಯೇಂದ್ರ ಹಸ್ತಕ್ಷೇಪ:** ಮೇಲ್ನೋಟಕ್ಕೆ ಅನುದಾನ ತಾರತಮ್ಯ ಎನ್ನುವ ಆರೋಪವನ್ನು ಕಟೀಲ್ ಮುಂದೆ ಮಾಡಿದ್ದರೂ, ಇದರೊಂದಿಗೆ ವಿಧಾನಪರಿಷತ್‌ನಲ್ಲಿ ಕೇವಲ ವಲಸಿಗರಿಗೆ ಅವಕಾಶ ನೀಡಲಾಗಿದೆ. ಸರಕಾರದಲ್ಲಿ ಯಡಿಯೂರಪ್ಪ ಅವರಿಗಿಂತ ಅವರ ಪುತ್ರ, ವಿಜಯೇಂದ್ರ ಅವರ ಹಸ್ತಕ್ಷೇಪ ಹೆಚ್ಚಾಗಿದೆ ಎನ್ನುವ ಆರೋಪ ಮಾಡಿದ್ದಾರೆ ಎಂದು ಮೂಲಗಳು ತಿಳಿಸಿವೆ.

ರಾಜ್ಯ ಬಿಜೆಪಿ ಕಚೇರಿಯಲ್ಲಿ ರಾಜ್ಯಾಧ್ಯಕ್ಷ ಕಟೀಲ್ ಅವರನ್ನು ಗುರುವಾರ ತಡರಾತ್ರಿ ಭೇಟಿ ಮಾಡಿರುವ ವಿಜಯಪುರ, ಧಾರವಾಡ, ಬೆಳಗಾವಿ, ತುಮಕೂರು, ದಕ್ಷಿಣ ಕನ್ನಡ ಜಿಲ್ಲೆಗಳ ಕೆಲ ಬಿಜೆಪಿ ಶಾಸಕರು ಬಿ.ಎಸ್.ಯಡಿಯೂರಪ್ಪ ವಿರುದ್ಧ ಆರೋಪಿಸಿ, ಕೂಡಲೇ ಮುಖ್ಯಮಂತ್ರಿ ಯಡಿಯೂರಪ್ಪ ಅವರಿಗೆ ಪಕ್ಷದ ರಾಜ್ಯಾಧ್ಯಕ್ಷ ಸೂಚನೆ ನೀಡಬೇಕು ಎಂದು ಒತ್ತಡ ಹೇರಿದ್ದಾರೆ ಎನ್ನಲಾಗಿದೆ.

**ಅನುದಾನ ನೀಡುತ್ತಿಲ್ಲ:** ಕರೋನಾ ಅವಧಿಯಲ್ಲಿ ಯಾವುದೇ ರೀತಿಯ ಭಿನ್ನಮಾತು ಕೇಳಿಬರಬಾರದು ಎಂದು ಕೇಂದ್ರ ನಾಯಕರು ಹೇಳಿದ್ದರೂ, ಅನುದಾನದ ತಾರತಮ್ಯದ ನೆಪದಲ್ಲಿ ಅಧಿಕಾರ ವಂಚಿತ ಪಕ್ಷದ ಅತೃಪ್ತ ಶಾಸಕರು ಯಡಿಯೂರಪ್ಪ ವಿರುದ್ಧ ಈಗ ತಿರುಗಿ ಬಿದ್ದಿದ್ದಾರೆ. ಮುಖ್ಯಮಂತ್ರಿಗಳು ತಮ್ಮ ಕ್ಷೇತ್ರಕ್ಕೆ ಅನುದಾನ ಬಿಡುಗಡೆ ಮಾಡುತ್ತಿಲ್ಲ ಎಂದು ದೂರು ನೀಡಿದ್ದಾರೆ. ಬಂಡಾಯ ಶಾಸಕರೆನ್ನಲಾದ ಬಸನಗೌಡ ಪಾಟೀಲ್ ಯತ್ನಾಳ್, ಅರವಿಂದ ಬೆಲ್ಲದ, ಅನಿಲ್ ಬೆನಕೆ ಸೇರಿದಂತೆ ಹಲವು ಶಾಸಕರು ಕಟೀಲ್‌ರನ್ನು ಭೇಟಿಯಾಗಿ ತಮ್ಮ ಕ್ಷೇತ್ರಗಳಿಗೆ ಅಭಿವೃದ್ಧಿ ಯೋಜನೆಗಳಿಗೆ ಸಿಎಂ ಅನುದಾನ ನೀಡುತ್ತಿಲ್ಲ. ಅಧ್ಯಕ್ಷರು ಮಧ್ಯ ಪ್ರವೇಶಿಸಿ, ಮುಖ್ಯಮಂತ್ರಿಯೊಂದಿಗೆ ಮಾತನಾಡಿ ಅನುದಾನ ಬಿಡುಗಡೆ ಮಾಡಲು ಒತ್ತಡ ಹಾಕುವಂತೆ ಮನವಿ ಮಾಡಿದ್ದಾರೆ.

**ಸಂಪುಟ ವಿಸ್ತರಣೆಗೆ ಪಟ್ಟು:** ಇದೇ ವೇಳೆ ಅನುದಾನದ ಜತೆಯಲ್ಲಿಯೇ ಸಂಪುಟ ವಿಸ್ತರಣೆಯ ಆಗ್ರಹವನ್ನು ಕಟೀಲ್ ಅವರ ಮುಂದೆ ಅತೃಪ್ತ ಶಾಸಕರು ಇಟ್ಟಿದ್ದಾರೆ ಎನ್ನಲಾಗಿದೆ. ಈ ಬಾರಿಯ ಸಂಪುಟ ವಿಸ್ತರಣೆ ವೇಳೆ ತಮಗೂ ಮಂತ್ರಿಮಂಡಲದಲ್ಲಿ ಅವಕಾಶ ನೀಡಬೇಕು ಎಂದು ಬಂಡಾಯ ಶಾಸಕರು ಕೋರಿದ್ದಾರೆ. ಕ್ಷೇತ್ರಕ್ಕೆ ಅನುದಾನ ಬಿಡುಗಡೆಗಾಗಿ ಭಿನ್ನಮತೀಯ ಶಾಸಕರು ಬಿಜೆಪಿ ಅಧ್ಯಕ್ಷರನ್ನು ಮೇಲ್ನೋಟಕ್ಕೆ ಭೇಟಿ ಮಾಡಿರುವರಾದರೂ ಇದರ ಹಿಂದಿನ ಉದ್ದೇಶವೇ ಬೇರೆ ಇದೆ. ಸಿಎಂ ವಿರುದ್ಧ ಸಿಡಿದೇಳಲು ಬಿಜೆಪಿಯ ಅತೃಪ್ತ ಶಾಸಕರು ಈಗಿನಿಂದಲೇ ವೇದಿಕೆ ಸಿದ್ಧಪಡಿಸುತ್ತಿದ್ದಾರೆ ಎಂದು ಹೇಳಲಾಗುತ್ತಿದೆ.

ಬಹುತೇಕ ಶಾಸಕರು ಕಟೀಲ್ ಅವರ ಬಳಿ ಮಾಡಿರುವ ಆರೋಪವೆಂದರೆ, ರಾಜ್ಯ ಸರಕಾರದ ಬೊಕ್ಕಸದಲ್ಲಿ ಹಣವಿಲ್ಲವೆಂದು ಹೇಳುತ್ತಾರೆ. ಆದರೆ ಶಿವಮೊಗ್ಗಕ್ಕೆ ಮಾತ್ರ ಕೋಟಿ ಕೋಟಿ ಅನುದಾನ ಸಿಗುತ್ತಿದೆ. ನಮ್ಮ ಕ್ಷೇತ್ರಕ್ಕೆ ಕೇಳಲು ಹೋದಾಗ ಮಾತ್ರ, ಅನುದಾನದ ಸಮಸ್ಯೆ ಎನ್ನುವ ಮಾತನ್ನು ಹೇಳಿ ಸಾಗಿ ಹಾಕುವ ಪ್ರಯತ್ನವನ್ನು ಮಾಡುತ್ತಿದ್ದಾರೆ. ಬಿಜೆಪಿ ಸರಕಾರ ಅಧಿಕಾರಕ್ಕೆ ಬಂದ ಬಳಿಕ ಯೋಜನೆಗಳನ್ನು ಜಾರಿಗೆ ತರುವ ಭರವಸೆ ನೀಡಿದ್ದ ಕ್ಷೇತ್ರದ ಜನರಿಗೆ ಇದೀಗ ಉತ್ತರಿಸಲು ಸಾಧ್ಯವಾಗುತ್ತಿಲ್ಲ. ಆದ್ದರಿಂದ ಕೂಡಲೇ ಈ ಸಮಸ್ಯೆಗೆ ಪರಿಹಾರ ಒದಗಿಸಬೇಕು. ಶಾಸಕರ ಕುಂದುಕೊರತೆ ಬಗೆಹರಿಸಲು ವಿಭಾಗವಾರು ಸಭೆ ಕರೆಯಬೇಕು ಎಂದು ಮನವಿ ಮಾಡಿದ್ದಾರೆ, ಎನ್ನಲಾಗಿದೆ.

**ಸೀಮಿತ ಬೇಡಿಕೆ:** ಸದ್ಯದ ಮಟ್ಟಿಗೆ ಇದು ಅನುದಾನ, ಕ್ಷೇತ್ರದ ಕೆಲಸ ಕಾರ್ಯಗಳಿಗೆ ಸೀಮಿತ ಬೇಡಿಕೆಯಾಗಿರುವ ಕಾರಣ ಪರಿಸ್ಥಿತಿ ಕೈ ಮೀರುವ ಸಾಧ್ಯತೆ ಕ್ಷೀಣವಾಗಿದೆ. ಆದರೂ ಬಂಡಾಯದಂತಹ ಚಟುವಟಿಕೆಯನ್ನು ನಿರ್ಲಕ್ಷಿಸಲು ಸಾಧ್ಯವಿಲ್ಲ. ಅಲ್ಲದೇ, ಬಿಜೆಪಿ ರಾಜ್ಯಾಧ್ಯಕ್ಷ ಕಟೀಲ್ ಅವರನ್ನು ಭೇಟಿ ಮಾಡುವ ಮುನ್ನ ಶಾಸಕರೊಬ್ಬರ ಮನೆಯಲ್ಲಿ ಸಭೆ ಸೇರಿ ಚರ್ಚಿಸಿ ನಂತರವೇ ಬಿಜೆಪಿ ಕಚೇರಿಗೆ ತೆರಳಿದ್ದಾರೆ. ಈ ಹಿಂದೆ ಉಮೇಶ್ ಕತ್ತಿ ನಿವಾಸದಲ್ಲಿ ಸಭೆ ಸೇರುತ್ತಿದ್ದರು. ಆದರೆ, ಈಗ ಯಾರ ನಿವಾಸದಲ್ಲಿ ಸಭೆ ಸೇರಿದ್ದರು ಎಂಬುದು ಕುತೂಹಲ ಮೂಡಿಸಿದೆ.

ಶಾಸಕಾಂಗ ಪಕ್ಷದ ಸಭೆ ನಡೆಸಬೇಕು ಎಂದು ಕಟೀಲ್ ಮುಂದೆ ಬೇಡಿಕೆ ಇಟ್ಟಿರುವ ಶಾಸಕರು ಸುಮಾರು 1 ಗಂಟೆಗಳ ಕಾಲ ರಾಜ್ಯಾಧ್ಯಕ್ಷರೊಂದಿಗೆ ಮಾತುಕತೆ ನಡೆಸಿದ್ದು, ಅಂತಿಮವಾಗಿ ಸಿಎಂ ಜತೆ ಮಾತನಾಡಿ ಸಮಸ್ಯೆ ಪರಿಹರಿಸುವುದಾಗಿ ಅವರು ಭರವಸೆ ನೀಡಿದ್ದಾರೆ. ಬಂಡಾಯ ಶಾಸಕರಲ್ಲಿ ಪ್ರಮುಖವಾಗಿ, ಬಸನಗೌಡ ಪಾಟೀಲ್ ಯತ್ನಾಳ್, ಅರವಿಂದ ಬೆಲ್ಲದ, ಅಭಯ್ ಪಾಟೀಲ್, ಅನಿಲ್ ಬೆನಕೆ, ಜ್ಯೋತಿ ಗಣೇಶ್, ವೇದವ್ಯಾಸ ಕಾಮತ್, ಭರತ್ ಶೆಟ್ಟಿ, ಅಮೃತ್ ದೇಸಾಯಿ ಸೇರಿದಂತೆ 10 ಶಾಸಕರು ಚರ್ಚೆಯಲ್ಲಿ ಭಾಗಿಯಾಗಿದ್ದರು.

### ಕತ್ತಿ, ನಿರಾಣಿ ಬಿಟ್ಟು ಬಂಡಾಯ

[illegible]

